# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***<u>ಪತ್ರಿಕಾ ಪ್ರಕಟಣೆ</u>*** **ದಿನಾಂಕ: 15.12.2010**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಕಛೇರಿಗಳ ಸಿಬ್ಬಂದಿಗಳು ಕಛೇರಿಗಳಿಗೆ ಬೆಳಿಗ್ಗೆ 10-00 ಗಂಟೆಗೆ ಸರಿಯಾಗಿ ಕರ್ತವ್ಯಕ್ಕೆ ಹಾಜರಾಗಿ ಸಂಜೆ 5-30ರ ವರೆವಿಗೂ ಕಡ್ಡಾಯವಾಗಿ ಕಛೇರಿಯಲ್ಲಿ ಹಾಜರಿದ್ದು, ಸಾರ್ವಜನಿಕರು ಮಾಹಿತಿಗಳನ್ನು ಕೋರಿ ಕಛೇರಿಗಳಿಗೆ ಭೇಟಿ ನೀಡಿದ ಸಂದರ್ಭಗಳಲ್ಲಿ ಮತ್ತು ದೂರವಾಣಿ ಮೂಲಕ ಸಂಪರ್ಕಿಸಿದ ಸಂದರ್ಭಗಳಲ್ಲಿ ಸೌಜನ್ಯದಿಂದ ವರ್ತಿಸಿ ಮಾಹಿತಿಗಳನ್ನು ನೀಡುವುದು ಹಾಗೂ ಎಲ್ಲಾ ಆಡಳಿತ ಸಿಬ್ಬಂದಿಗಳು ಕಛೇರಿ ವೇಳೆಯಲ್ಲಿ ಗುರುತಿನ ಚೀಟಿಗಳನ್ನು ಮತ್ತು 4ನೇ ದರ್ಜೆ ನೌಕರರು ಸಮವಸ್ತ್ರ ಮತ್ತು ಗುರುತಿನ ಚೀಟಿಗಳನ್ನು ಧರಿಸಿ ಕರ್ತವ್ಯ ನಿರ್ವಹಿಸಲು ದಿನಾಂಕ: 02.08.2010 ಮತ್ತು 24.09.2010 ರಂದು ಸುತ್ತೋಲೆಗಳಲ್ಲಿ ಸೂಚಿಸಲಾಗಿರುತ್ತದೆ. ಆದರೂ ಸಹ ಕೆಲವು ಮಂದಿ ಸಿಬ್ಬಂದಿಗಳು ಮೇಲ್ಕಂಡ ಸುತ್ತೋಲೆಗಳ ಆದೇಶವನ್ನು ಪಾಲಿಸದೇ ಇರುವುದು ಗಮನಕ್ಕೆ ಬಂದಿರುತ್ತದೆ.

ಈ ಹಿನ್ನೆಲೆಯಲ್ಲಿ ಎಲ್ಲಾ ಸಿಬ್ಬಂದಿ ವರ್ಗದವರು ಈ ಸುತ್ತೋಲೆಯ ಆದೇಶವನ್ನು ಪಾಲಿಸಿ ಸರಿಯಾದ ವೇಳೆಗೆ ಕಛೇರಿಗೆ ಹಾಜರಾಗುವುದು ಮತ್ತು ಗುರುತಿನ ಚೀಟಿಗಳನ್ನು ಧರಿಸಿ ಕಾರ್ಯನಿರ್ವಹಿಸುವುದು ಹಾಗೂ 4ನೇ ದರ್ಜೆ ನೌಕರರುಗಳು ಸಮವಸ್ತ್ರ ಹಾಗೂ ಗುರುತಿನ ಚೀಟಿಗಳನ್ನು ಕಡ್ಡಾಯವಾಗಿ ಧರಿಸಿ ಕಾರ್ಯನಿರ್ವಹಿಸಲು ಸೂಚಿಸಲಾಗಿದೆ.

ಅಲ್ಲದೇ, ಸಂಬಂಧಪಟ್ಟ ಎಲ್ಲಾ ಬಟವಾಡೆ ಅಧಿಕಾರಿಗಳು ಈ ಸುತ್ತೋಲೆಯನ್ವಯ ಗುರುತಿನ ಚೀಟಿಗಳನ್ನು ಮತ್ತು ಸಮವಸ್ತ್ರಗಳನ್ನು ಧರಿಸದೇ ಕರ್ತವ್ಯ ನಿರ್ವಹಿಸುವ ನೌಕರರುಗಳ ಮೇಲೆ ಶಿಸ್ತಿನ ಕ್ರಮ ಕೈಗೊಳ್ಳುವ ಸಲುವಾಗಿ ವರದಿಯನ್ನು ಸಲ್ಲಿಸಲು ಸೂಚಿಸಲಾಗಿದೆ.

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಕಛೇರಿಗಳ ಬಟವಾಡೆ ಅಧಿಕಾರಿಗಳು, ತಮ್ಮ ಕಛೇರಿಗಳಿಗೆ ಸಂಬಂಧಿಸಿದ ಕಛೇರಿಯ ದಾಖಲೆಗಳನ್ನು ಹಾಗೂ ಕಛೇರಿಯ ಸಿ.ಎಲ್. ವಹಿ, ಕ್ಯಾಷ್ ವಹಿ ಮತ್ತು ಸ್ಟಾಕ್ ವಹಿಗಳನ್ನು ಕಟ್ಟುನಿಟ್ಟಾಗಿ ನಿರ್ವಹಿಸಲು ಪಾಲಿಕೆಯ ಆಯುಕ್ತರು ಸೂಚಿಸಿ, ಸುತ್ತೋಲೆ ಹೊರಡಿಸಿದ್ದಾರೆ.

**ಸಾರ್ವಜನಿಕ ಸಂಪರ್ಕಾಧಿಕಾರಿ**